**Akashvani : Bangalore**
**Regional Bulletin In Kannada**
**06.01.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. **ಪೂರ್ಣಾವಧಿ ಮುಖ್ಯಮಂತ್ರಿಯಾಗಿ ಮುಂದುವರಿಯುವ ವಿಶ್ವಾಸವಿದೆ- ಮುಖ್ಯಮಂತ್ರಿ ಸಿದ್ದರಾಮಯ್ಯ**

೨. **ಹಂಪಿಯಲ್ಲಿ ಪುರಾತತ್ವ ಇಲಾಖೆಯ ಡಿಜಿಟಲ್ ಗ್ಯಾಲರಿ ಉದ್ಘಾಟಿಸಿದ ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್**

೩. **ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಪೆನಾಂಗ್ ಉಪಮುಖ್ಯಮಂತ್ರಿ ಭೇಟಿ**

೪. **ಬೆಂಗಳೂರು ಓಪನ್ ಟೆನಿಸ್; ೩೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ಕರಣ್ ಸಿಂಗ್ ವಿರುದ್ಧ ಕ್ರೊಯೇಷಿಯಾದ ಬೋರ್ನಾ ಗೋಜೊಗೆ ಜಯ**

**<><*<><>*><>**

ಪೂರ್ಣಾವಧಿ ಮುಖ್ಯಮಂತ್ರಿ ಆಗುವ ವಿಶ್ವಾಸ ತಮಗಿದ್ದು, ಎಲ್ಲವೂ ಹೈಕಮಾಂಡ್ ತೀರ್ಮಾನವನ್ನು ಅವಲಂಬಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕಾರಣ ತೃಪ್ತಿಕೊಟ್ಟಿದೆ. ಜನರಿಗೆ ಕೆಲಸ ಮಾಡುವುದೇ ಖುಷಿ. ಬಡವರು, ದಲಿತರು, ಹಿಂದುಳಿದವರಿಗೆ ನ್ಯಾಯ ಕೊಡಿಸುವುದೇ ರಾಜಕಾರಣ. ಸುದೀರ್ಘ ಅವಧಿಯ ಮುಖ್ಯಮಂತ್ರಿಯೆಂಬ ದಾಖಲೆ ಮಾಡುತ್ತೇನೆಂದು ಅಂದುಕೊಂಡಿರಲಿಲ್ಲ. ಡಿ.ದೇವರಾಜ ಅರಸು ಮತ್ತು ತಾವು, ಇಬ್ಬರೂ ಮೈಸೂರಿನವರಾದರೂ ನಮ್ಮ ಕಾಲಘಟ್ಟ ಬೇರೆ ಎಂದು ತಿಳಿಸಿದರು. ದೇವರಾಜ ಅರಸು ೧೯೭೨ರಿಂದ ೧೯೮೦ರವರೆಗೆ ಮುಖ್ಯಮಂತ್ರಿಯಾಗಿದ್ದರು. ಜನರ ಆಶೀರ್ವಾದದಿಂದ ೨೦೧೩ರಿಂದ ೨೦೧೮ ಮತ್ತು ೨೦೨೩ರಲ್ಲಿ ಎರಡು ಅವಧಿಗೆ ಮುಖ್ಯಮಂತ್ರಿ ಆಗಿದ್ದೇನೆ. ಮುಂದೆ ಹೈಕಮಾಂಡ್ ಏನು ತೀರ್ಮಾನಿಸುತ್ತದೆಂದು ಕಾದುನೋಡಬೇಕು ಎಂದು ಹೇಳಿದರು. ಸಮಾಜದಲ್ಲಿ ಅಸಮಾನತೆ ಇನ್ನೂ ಇದ್ದು, ಅದು ಹೋಗುವವರೆಗೂ, ಜನರಿಗೆ ಸಾಮಾಜಿಕ ನ್ಯಾಯ ಸಿಗುವವರೆಗೂ ಹೋರಾಟ ಮಾಡುತ್ತಲೇ ಇರಬೇಕು. ಜನರ ಕೆಲಸ ಮಾಡುತ್ತಲೇ ಇರುವೆ ಎಂದರು.

ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು ವಯನಾಡ್‌ನಿಂದ ಬೆಂಗಳೂರು ಮೂಲಕ ದೆಹಲಿಗೆ ಹೋಗುವವರಿದ್ದರು. ಮೈಸೂರಿಗೆ ಬಂದಿದ್ದರಿಂದ, ಹಾಗೆಯೇ ಭೇಟಿ ಮಾಡಿದ್ದೇವಷ್ಟೇ. ಸಂಪುಟ ಪುನರ್‌ರಚನೆ ಬಗ್ಗೆ ಚರ್ಚಿಸಲು ಹೈಕಮಾಂಡ್ ಕರೆದಾಗ ಹೋಗುವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ವಿಜಯನಗರ ಜಿಲ್ಲೆಯ ವಿಶ್ವ ಪಾರಂಪರಿಕ ತಾಣ ಹಂಪಿಯಲ್ಲಿ ಪುರಾತತ್ವ ಇಲಾಖೆಯ ಡಿಜಿಟಲ್ ಗ್ಯಾಲರಿಯನ್ನು ಕೇಂದ್ರ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಉದ್ಘಾಟಿಸಿದರು. ಇದೇ ವೇಳೆ, ಹಂಪಿಯ ಸ್ಮಾರಕಗಳ ರಕ್ಷಣೆ ಜತೆಗೆ ಸುಸ್ಥಿರ ಅಭಿವೃದ್ಧಿಗೆ, ಮೂಲಸೌಲಭ್ಯ ವೃದ್ಧಿಗೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಪ್ರವಾಸಿ ಮಾರ್ಗದರ್ಶಿಗಳ ಸಂಘವು ಸಚಿವರಿಗೆ ಮನವಿ ಸಲ್ಲಿಸಿತು. ಎರಡು ದಿನಗಳ ಹಂಪಿ ಪ್ರವಾಸದಲ್ಲಿರುವ ಸಚಿವರನ್ನು ಇಂದು ಭೇಟಿ ಮಾಡಿದ ಸಂಘದ ಪ್ರಧಾನ ಕಾರ್ಯದರ್ಶಿ ವಿ.ವಿರೂಪಾಕ್ಷಿ ಮತ್ತು ಇತರ ಮಾರ್ಗದರ್ಶಿಗಳು, ಹಲವು ಬೇಡಿಕೆಗಳ ಕುರಿತು ಮನವಿ ಸಲ್ಲಿಸಿದರು. ಹಂಪಿಗೆ ಅಗತ್ಯವಾಗಿ ತುರ್ತು ವೈದ್ಯಕೀಯ ಸೌಲಭ್ಯಗಳು ಬೇಕಾಗಿವೆ. ಪ್ರಮುಖವಾಗಿ ಪ್ರಥಮ ಚಿಕಿತ್ಸಾಕೇಂದ್ರ, ಆಂಬುಲೆನ್ಸ್ ಒದಗಿಸಬೇಕು. ಬಿಸಿಲು ಸಂಬಂಧಿತ ತೊಂದರೆಗಳಿಂದ ಪರಿಹಾರ ಒದಗಿಸುವ ನಿಟ್ಟಿನಲ್ಲಿ ತರಬೇತಿ ಪಡೆದ ವೈದ್ಯಕೀಯ ಸಿಬ್ಬಂದಿಯನ್ನು ನಿಯೋಜಿಸಬೇಕು. ಪ್ರವಾಸಿ ಮಾರ್ಗದರ್ಶಿಗಳಿಗೆ ಆರೋಗ್ಯ ವಿಮೆ ಸೌಲಭ್ಯ ಒದಗಿಸಬೇಕು, ಉಚಿತ ಅಥವಾ ರಿಯಾಯಿತಿ ದರದಲ್ಲಿ ರೈಲ್ವೆ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಪ್ರವಾಸಿ ಮಾರ್ಗದರ್ಶಿಗಳು ಒತ್ತಾಯಿಸಿದರು.

**<><*<><>*><>**

ಮಲೇಷಿಯಾದ ದ್ವೀಪ ರಾಜ್ಯ ಪೆನಾಂಗ್‌ನ ಉಪಮುಖ್ಯಮಂತ್ರಿ ಜಗದೀಪ್ ಸಿಂಗ್ ಡಿಯೋ ನೇತೃತ್ವದ ಉನ್ನತ ಮಟ್ಟದ ನಿಯೋಗ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿ ಮಹತ್ವದ ಸಮಾಲೋಚನೆ ನಡೆಸಿತು. ಕುಲಪತಿಗಳಾದ ಪ್ರೊಫೆಸರ್ ರಮೇಶ್.ಬಿ. ನಿಯೋಗವನ್ನು ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು. ಬಳಿಕ ಉನ್ನತ ಶಿಕ್ಷಣ ಮತ್ತು ಕೌಶಲ್ಯ ತರಬೇತಿ ವಿಚಾರದಲ್ಲಿ ಪರಸ್ಪರ ಸಹಕಾರದ ಸಾಧ್ಯತೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ವಿಶ್ವವಿದ್ಯಾನಿಲಯದ ಜಾಗತಿಕ ಭಾಷಾ ಕೇಂದ್ರ, ವಿಜ್ಞಾನ, ವಾಣಿಜ್ಯ, ಆಡಳಿತ ಮತ್ತು ಕಂಪ್ಯೂಟರ್ ಶಿಕ್ಷಣ ವಿಭಾಗಗಳ ಜೊತೆ ವಿದ್ಯಾರ್ಥಿ ಮತ್ತು ಬೋಧಕ ವಿನಿಮಯ ಕಾರ್ಯಕ್ರಮ ಹಮ್ಮಿಕೊಳ್ಳಲು ಪೆನಾಂಗ್ ನಿಯೋಗ ಆಸಕ್ತಿ ವ್ಯಕ್ತಪಡಿಸಿತು. ಈ ನಿಟ್ಟಿನಲ್ಲಿ ಆದಷ್ಟು ಬೇಗ ಅಧಿಕೃತ ಒಡಂಬಡಿಕೆ ಮಾಡಿಕೊಳ್ಳುವುದಾಗಿ ಪೆನಾಂಗ್ ಉಪಮುಖ್ಯಮಂತ್ರಿ ಖಚಿತಪಡಿಸಿದರು. ವಿಶ್ವವಿದ್ಯಾನಿಲಯದ ನಿಯೋಗವನ್ನು ಪೆನಾಂಗ್ ಕೈಗಾರಿಕೆ ಮತ್ತು ಶಿಕ್ಷಣ ವಸ್ತುಪ್ರದರ್ಶನದಲ್ಲಿ ಪಾಲ್ಗೊಳ್ಳಲು ಅವರು ಆಮಂತ್ರಣವಿತ್ತರು.

<><*<><>*><>

ಸಿಬಿಎಸ್‌ಸಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಭಯ, ಒತ್ತಡ ನಿಭಾಯಿಸುವ ಸಲುವಾಗಿ ಮಾನಸಿಕ, ಸಾಮಾಜಿಕ, ಆಪ್ತ ಸಮಾಲೋಚನೆಗೆ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ ಚಾಲನೆ ನೀಡಿದೆ. ಮೊದಲ ಹಂತದಲ್ಲಿ ಹತ್ತು ಮತ್ತು ಹನ್ನೆರಡನೇ ತರಗತಿ ವಿದ್ಯಾರ್ಥಿಗಳಿಗೆ ಆಪ್ತ ಸಮಾಲೋಚನೆ ನಡೆಸುತ್ತಿದ್ದು, ಇದು ಜೂನ್ ೧ರವರೆಗೆ ಮುಂದುವರೆಯಲಿದೆ. ಇದರ ಜೊತೆಗೆ ಮುಂಬರುವ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲು ಹಾಗೂ ಆತ್ಮ ವಿಶ್ವಾಸ ತುಂಬಲು ಆಪ್ತ ಸಮಾಲೋಚಕರು ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ಮಾಡಲಿದ್ದಾರೆ. ವಿದ್ಯಾರ್ಥಿಗಳು ಮಾಹಿತಿಗಾಗಿ ೧೮೦೦-೧೧-೮೦೦೪ ಕರೆ ಮಾಡಬಹುದಾಗಿದೆ ಎಂದು ಹೇಳಿದೆ.

<><*<><>*><>

ಕಂದಾಯ ಇಲಾಖೆಯು ಸಾರ್ವಜನಿಕ ಸೇವೆಗಳಲ್ಲಿ ಪಾರದರ್ಶಕತೆ ಮತ್ತು ವೇಗವನ್ನು ಹೆಚ್ಚಿಸಲು ಕಾನೂನುಗಳಲ್ಲಿ ಐತಿಹಾಸಿಕ ತಿದ್ದುಪಡಿಗಳನ್ನು ತಂದಿದೆ. ಈ ಬದಲಾವಣೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸನ್ನದ್ಧರಾಗಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ಹೇಳಿದ್ದಾರೆ. ಕೋಲಾರದಲ್ಲಿ ಕಂದಾಯ ಅಧಿಕಾರಿ ಮತ್ತು ಸಿಬ್ಬಂದಿಗಾಗಿ ಹಮ್ಮಿಕೊಳ್ಳಲಾಗಿದ್ದ ಕರ್ನಾಟಕ ಭೂಸುಧಾರಣಾ ಅಧಿನಿಯಮ ೧೯೬೪ಕ್ಕೆ ತಂದಿರುವ ತಿದ್ದುಪಡಿಗಳ ಕುರಿತು ವಿಶೇಷ ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಅವರು, ಕೈಗಾರಿಕೆ ಮತ್ತು ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ಪೂರಕವಾಗಿ ಭೂಮಿ ಮಂಜೂರಾತಿ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಲಾಗಿದೆ ಎಂದರು. ಎರಡು ಎಕರೆವರೆಗಿನ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕೆ ಬಳಸಲು ಇನ್ನು ಮುಂದೆ ಜಿಲ್ಲಾಧಿಕಾರಿಗಳ ಕಚೇರಿಗೆ ಅಲೆಯುವ ಅಗತ್ಯವಿಲ್ಲ. ಅಫಿಡವಿಟ್ ಸಲ್ಲಿಸಿದ ೧೫ ದಿನಗಳೊಳಗೆ ಸಂಬಂಧಪಟ್ಟ ಇಲಾಖೆಗಳು ಪ್ರತಿಕ್ರಿಯಿಸದಿದ್ದರೆ, ಅದನ್ನು ಅನುಮೋದಿತ ಎಂದು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

<><*<><>*><>

ಕೊಡವ ಭಾಷೆಯನ್ನು ಭಾರತ ಸಂವಿಧಾನದ ೮ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಸರ್ಕಾರದಿಂದ ವರದಿ ಕೇಳಲಾಗಿದ್ದು, ಈ ಸಂಬಂಧ ಉಪ ಸಮಿತಿಗಳ ತಂಡ ರಚಿಸಿಕೊಂಡು ಕಾನೂನಾತ್ಮಕ ಮಾನದಂಡದನ್ವಯ ವರದಿ ಸಿದ್ಧಪಡಿಸುವಂತೆ ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಸಲಹೆ ನೀಡಿದ್ದಾರೆ. ಕೊಡವ ಭಾಷೆಯನ್ನು ಭಾರತ ಸಂವಿಧಾನದ ೮ನೇ ಪರಿಚ್ಛೇದದಲ್ಲಿ ಸೇರ್ಪಡೆ ಕುರಿತು ವಿರಾಜಪೇಟೆಯಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಕೊಡವ ಭಾಷೆಯನ್ನು ಭಾರತ ಸಂವಿಧಾನದ ೮ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡಬೇಕೆಂದು ಹಲವು ದಶಕಗಳಿಂದ ಹೋರಾಟ ಮಾಡಿಕೊಂಡು ಬರಲಾಗಿದೆ. ಈಗಾಗಲೇ ಎರಡು ಬಾರಿ ವರದಿ ಸಲ್ಲಿಸಲಾಗಿದೆ. ಹಾಗಾಗಿ ಕೊಡವ ಭಾಷೆ ಸಂವಿಧಾನದ ೮ನೇ ಪರಿಚ್ಛೇದ ಸೇರ್ಪಡೆ ಪ್ರಕ್ರಿಯೆಯನ್ನು ಶಿಸ್ತುಬದ್ಧವಾಗಿ ನಿಯಮಾನುಸಾರದಂತೆ ನಡೆಸಬೇಕು. ಆ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸುವಂತೆ ಎ.ಎಸ್.ಪೊನ್ನಣ್ಣ ಮನವಿ ಮಾಡಿದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲೊಂದಾದ ಕಟೀಲು ಶ್ರೀ ದುರ್ಗಾಪರಮೇಶ್ವರೀ ದೇವಸ್ಥಾನ ೨೦೨೪-೨೫ರ ಸಾಲಿನಲ್ಲಿ ೩೬ ಕೋಟಿ ೨೪ ಲಕ್ಷದ ೮೯೧ ಸಾವಿರದ ೩೫ ರೂಪಾಯಿ ಆದಾಯ ಗಳಿಸಿದೆ. ಕಳೆದ ವರ್ಷ ೨೦೨೩-೨೪ರಲ್ಲಿ ಆದಾಯ ೩೨ ಕೋಟಿ ೫೩ ಲಕ್ಷ ರೂಪಾಯಿ ಆಗಿದ್ದು, ಈ ವರ್ಷ ಮೂರೂವರೆ ಕೋಟಿ ರೂಪಾಯಿಯಷ್ಟು ಆದಾಯ ಹೆಚ್ಚಾಗಿದೆ.  ವಿವಿಧ ಸೇವೆಗಳಿಂದ ೧೨ ಕೋಟಿ ರೂಪಾಯಿ, ಅನ್ನದಾನ, ವಿದ್ಯಾದಾನ ಕಾಣಿಕೆ ಮತ್ತು ಹುಂಡಿಯಿಂದ ೬ ಕೋಟಿ ರೂಪಾಯಿ, ಕಾಣಿಕೆ ಹುಂಡಿಯಿಂದ ೬.೨೦ ಕೋಟಿ ರೂಪಾಯಿ ಇ-ಹುಂಡಿಯಿಂದ ೨೪ ಲಕ್ಷ ರೂಪಾಯಿ ಬಂದಿದೆ.

**<><*<><>*><>**

ಬೆಂಗಳೂರಿನಲ್ಲಿ ನಡೆಯುತ್ತಿರುವ ಬೆಂಗಳೂರು ಓಪನ್ ಟೆನಿಸ್ ಪಂದ್ಯಾವಳಿಯ ೩೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ಕರಣ್ ಸಿಂಗ್ ವಿರುದ್ಧ ೬-೨, ೬-೪ ಅಂತರದಲ್ಲಿ ಕ್ರೊಯೇಷಿಯಾದ ಬೋರ್ನಾ ಗೋಜೋ ಜಯ ಸಾಧಿಸಿದ್ದಾರೆ. ೩೨ನೇ ಸುತ್ತಿನ ಮತ್ತೊಂದು ಪಂದ್ಯದಲ್ಲಿ ಕಜಕಿಸ್ತಾನದ ಬಿಬಿತ್ ಸುಖಾಯಾವ್ ವಿರುದ್ಧ ೬-೧, ೬-೨ ಅಂತರದಲ್ಲಿ ಭಾರತದ ಆರ್ಯನ್ ಶಾ ಪರಾಭವಗೊಂಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**